## 6. ಕೆರೆ ರಕ್ಷಣೆಗೆ ಸಮಿತಿ ರಚನೆ

ಯಲಹಂಕದ ಬಳಿಯ ಪುಟ್ಟೇನಹಳ್ಳಿ ಕೆರೆ ರಕ್ಷಣೆಗೆ ಜಲಾಶಯ ನಿರ್ವಹಣಾ ಸಮಿತಿ ರಚಿಸುವಂತೆ ರಾಜ್ಯ ಹೈಕೋರ್ಟ್ ಸರ್ಕಾರಕ್ಕೆ ಆದೇಶಿಸಿದೆ.

ಈ ಕೆರೆ ನಿರ್ವಹಣೆಯನ್ನು ಬಿಬಿಎಂಪಿಗೆ ವಹಿಸಿರುವುದನ್ನು ಪ್ರಶ್ನಿಸಿ ಪುಟ್ಟೇನಹಳ್ಳಿ ಕೆರೆ ಮತ್ತು ಪಕ್ಷಿ ಸಂರಕ್ಷಣಾ ಟ್ರಸ್ಟ್ ಮತ್ತು ಸ್ಥಳೀಯ ನಿವಾಸಿಗಳು ಹೈಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು.

ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಾಮೂರ್ತಿ ಅಭಯ್ ಶ್ರೀನಿವಾಸ ಓಕಾ ನೇತೃತ್ವದ ನ್ಯಾಯಪೀಠವು ಈ ಹಿಂದೆಯೇ ಕೆರೆ ನಿರ್ವಹಣೆಗೆ ಜಲಾಶಯ ನಿರ್ವಹಣಾ ಸಮಿತಿ ರಚಿಸುವಂತೆ ಸೂಚಿಸಿದ್ದರೂ ಹಾಗೇ ಮಾಡಿರಲಿಲ್ಲ. ಸರ್ಕಾರಿ ಪರ ವಕೀಲರು ಮೂರು ವಾರಗಳ ಕಾಲಾವಕಾಶ ಕೋರಿದರು. ಇದೇ ಸಂದರ್ಭದಲ್ಲಿ ಅರ್ಜಿದಾರರ ವಕೀಲರು ವಾದಿಸಿ, ಸೆಪ್ಟೆಂಬರ್, ಡಿಸೆಂಬರ್‌ನಲ್ಲಿ ವಲಸೆ ಪಕ್ಷಿಗಳು ಸಂತಾನೋತ್ಪತ್ತಿಯಲ್ಲಿ ತೊಡಗಲಿವೆ. ಹೀಗಾಗಿ ಪಕ್ಷಿಗಳು ನೆಲೆಸುವಂತಹ ಸುರಕ್ಷಿತ ವಾತಾರವಣ ಕಲ್ಪಿಸಬೇಕಿದೆ ಎಂದರು.

ಪುಟ್ಟೇನಹಳ್ಳಿ ಕೆರೆ ವ್ಯಾಪ್ತಿಯಲ್ಲಿ 175ಕ್ಕೂ ಅಧಿಕ ಪ್ರಭೇಧದ ಪಕ್ಷಿ ಸಂಕುಲವಿದೆ. ಅರಣ್ಯ ಇಲಾಖೆಯು ಈ ಪ್ರದೇಶವನ್ನು ಪಕ್ಷಿ ಸಂರಕ್ಷಿತ ವಲಯವೆಂದು ಘೋಷಿಸಿದೆ. ಕೆರೆಯನ್ನು ಬಿಬಿಎಂಪಿಗೆ ವಹಿಸಿರುವುದು ಸರಿಯಲ್ಲ ಎಂದು ವಿವರಿಸಿದರು.

## ಕೋವಿಡ್ ಪ್ರಯೋಗಾಲಯ ವಿರುದ್ಧ ದೂರಿಗೆ ಸೂಚನೆ

ರಾಷ್ಟ್ರೀಯ ವೈದ್ಯಕೀಯ ನಿಯಮಾವಳಿ ಅನುಸರಿಸದೆಯೇ ಕೋವಿಡ್-19 ಪರೀಕ್ಷೆ ನಡೆಸುತ್ತಿರುವ ಖಾಸಗಿ ಪ್ರಯೋಗಾಲಯ ವಿರುದ್ಧ ದೂರು ದಾಖಲಿಸುವಂತೆ ಬಿಬಿಎಂಪಿಗೆ ರಾಜ್ಯ ಹೈಕೋರ್ಟ್ ನ್ಯಾಯಪೀಠ ನಿರ್ದೇಶಿಸಿದೆ.

ನಾಗರಬಾವಿಯಲ್ಲಿ ಕೇಂದ್ರ ಉಪಾಧ್ಯಾಯರ ಸಂಘದ ಬಡಾವಣೆಯಲ್ಲಿರುವ ಮೆಡಿಕಲ್ ಡಯಾಗ್ನೋಷ್ಟಿಕ್ಸ್ ಅಂಡ್ ಸ್ಪೆಷಾಲಿಟಿ ಸೆಂಟರ್ ವಿರುದ್ಧ ಸ್ಥಳೀಯ ನಿವಾಸಿಗಳಾದ ಎಸ್.ಗಂಗಪ್ಪ ಮತ್ತು ಶಿವಮೂರ್ತಿ ಎಂಬುವವರು ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿ ಸೋಂಕು ನಿಯಂತ್ರಿಸುವ ಯಾವುದೇ ವೈಜ್ಞಾನಿಕ ಕ್ರಮ ಜರುಗಿಸಿಲ್ಲ. ಕೂಡಲೇ ಕೊರೋನಾ ಪರೀಕ್ಷೆ ನಡೆಸುವುದನ್ನು ನಿಲ್ಲಿಸಲು ಆದೇಶಿಸುವಂತೆ ಕೋರಿದ್ದರು.

ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಅಭಯ್ ಶ್ರೀನಿವಾಸ ಓಕಾ ನೇತೃತ್ವದ ನ್ಯಾಯಪೀಠವು ಈ ಬಗ್ಗೆ ಬಿಬಿಎಂಪಿಗೆ ದೂರು ನೀಡುವಂತೆ ಸೂಚಿಸಿದ್ದು, ಈ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ಜರುಗಿಸುವಂತೆ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದೆ.

ಆಧಾರ:ಸಂಯುಕ್ತ ಕರ್ನಾಟಕ, ದಿನಾಂಕ:20.07.2020